



ಅರುಣ ಪಿ. ಭಟ್ಟ

## ವಾರಭವಿಷ್ಯ: 01.02.2023ರಿಂಧ 08.02.2023ರವರೆಗೆ




ಕುಟುಂಬದ ಸದಸ್ಯರೊಂದಿಗಿನ ಸಂಬಂಧಗಳು ಸುಧಾರಿಸುತ್ತವೆ. ನಿಮ್ಮ ಆದಾಯದಲ್ಲಿ ಹೆಚ್ಚಳವಾಗಬಹುದು ಮತ್ತು ಸಮಾಜದಲ್ಲಿ ನಿಮ್ಮ ಸ್ಥಾನವು ಸುಧಾರಿಸಬಹುದು. ಯಾವುದೇ ಕಷ್ಟಕರ ಪರಿಸ್ಥಿತಿಯನ್ನು ಎದುರಿಸಲು ಬೇಕಾಗುವಂತಹ ಶಕ್ತಿ ಈ ಸಮಯದಲ್ಲಿ ನಿಮ್ಮಲ್ಲಿ ಇರುತ್ತದೆ ಮತ್ತು ಪ್ರತಿಯೊಂದು ಸಮಸ್ಯೆಯನ್ನು ನಿವಾರಿಸಲು ನಿಮಗೆ ಸಾಧ್ಯವಾಗುತ್ತದೆ. ಶುಭದಿನ: 06. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣಗಳಿದ್ದರೆ ಆ ಕಡೆ ಹೆಚ್ಚಿನ ಗಮನ ನೀಡಬೇಕು. ಇಲ್ಲದಿದ್ದಲ್ಲಿ ದೊಡ್ಡ ಮಟ್ಟದಲ್ಲಿ ನಷ್ಟ ಅನುಭವಿಸಬೇಕಾಗುತ್ತದೆ. ಸಂಗಾತಿ ಮಕ್ಕಳಿಗೆ ಬೆಲೆ ಬಾಳುವ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಉತ್ತಮ ಅವಕಾಶಗಳು ಹುಡುಕಿಕೊಂಡು ಬರುತ್ತವೆ. ಶುಭದಿನ: 05. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.




ನಿಮ್ಮ ವೈಯಕ್ತಿಕ ವರ್ಚಸ್ಸು, ಸಾಮಾಜಿಕವಾದ ಗೌರವದ ನೆರವಿನಿಂದ ಇತರರಿಗೆ ಸಹಾಯ ಮಾಡಲು ಮುಂದಾಗುತ್ತೀರಿ. ಪೋಷಕರಿಗೆ ಮಕ್ಕಳ ವರ್ತನೆ, ಬೆಳವಣಿಗೆ ಹಾಗೂ ನಡವಳಿಕೆಯಿಂದ ಸಂತೋಷ ಉಂಟಾಗುತ್ತದೆ. ಆರೋಗ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಆಹಾರ, ನೀರು ಸೇವಿಸುವಾಗ ಸ್ವಚ್ಛತೆ ಬಗ್ಗೆ ಹೆಚ್ಚು ಗಮನ ನೀಡಿ. ಶುಭದಿನ: 04. ಶ್ರೀಗೋವಿಂದಾಷ್ಟಕಮ್ ಪಠಿಸಿರಿ.




ನಿಮ್ಮ ಆದಾಯದಲ್ಲಿ ಹೆಚ್ಚಳ ಕಾಣಿಸಿಕೊಳ್ಳಲಿದೆ. ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಪ್ರತಿಫಲ ದೊರೆಯಲು ಆರಂಭವಾಗುತ್ತದೆ. ಸಾಮಾಜಿಕವಾಗಿ ನಿಮ್ಮ ವರ್ಚಸ್ಸು ಹೆಚ್ಚಾಗುತ್ತದೆ. ವಿದ್ಯಾರ್ಥಿಗಳಿಗೆ ಈ ವಾರ ಯಶಸ್ಸು ದೊರೆಯುವ ಅವಕಾಶಗಳು ಹೆಚ್ಚಿದೆ. ಹಣಕಾಸಿನ ವ್ಯವಹಾರದಲ್ಲಿ ಅನಿರೀಕ್ಷಿತವಾದ ಬಿಕ್ಕಟ್ಟು ಎದುರಾಗಿ, ಗೊಂದಲಕ್ಕೆ ಒಳಗಾಗುತ್ತೀರಿ. ಶುಭದಿನ: 05. ವಿಷ್ಣುಸಹಸ್ರನಾಮ ಓದಿರಿ.




ಉದ್ಯೋಗ ಅಥವಾ ವ್ಯಾಪಾರ ನಿಮಿತ್ತವಾಗಿ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗಲಿದೆ. ಹಣ ಹೂಡಿಕೆಯಲ್ಲಿ ಉತ್ತಮ ಲಾಭ ಇದೆ. ಉದ್ಯೋಗ ಸ್ಥಳದಲ್ಲಿ ಸ್ವಲ್ಪ ಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು. ಆರೋಗ್ಯದಲ್ಲೂ ಏರು ಪೇರಾಗುತ್ತದೆ. ಸೋದರರ ಜೊತೆ ಉತ್ತಮ ಬಾಂಧವ್ಯ ಇರುತ್ತದೆ. ಶುಭ ಸುದ್ದಿ ಕೇಳುವ ಯೋಗವಿದೆ. ಶುಭದಿನ: 06. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.




ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಆ ಮೂಲಕ ಅವರ ಮೆಚ್ಚುಗೆಯನ್ನು ಪಡೆಯುತ್ತೀರಿ. ಪರಿಣಾಮಕಾರಿಯಾದ ಕಾರ್ಯ ವೈಖರಿಯನ್ನು ಮೆಚ್ಚಿಕೊಳ್ಳುತ್ತಾರೆ. ಉದ್ಯೋಗ ಜೀವನದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಇದಾಗಿರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ಕುಟುಂಬದಲ್ಲಿ ಸಂತಸ ಇರುತ್ತದೆ. ಶುಭದಿನ: 07. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ನೀವು ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಅದಕ್ಕಾಗಿ ಅವರಿಗೆ ಗೌರವ ಹಾಗೂ ಅಧಿಕಾರ ನೀಡುತ್ತೀರಿ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಈ ವಾರ ನೀವು ಕೆಲವು ಧಾರ್ಮಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಶುಭದಿನ: 04. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡಿ ಮುಗಿಸುತ್ತಾರೆ. ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂಕ್ಕೆ ಶ್ರಮ ಹಾಕಲಿದ್ದೀರಿ. ಶುಭದಿನ: 05. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಅಗತ್ಯ ಸಿಬ್ಬಂದಿಯ ನೇಮಕದಲ್ಲಿ ಕೆಲವು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ಪ್ರಮುಖ ಕೆಲಸ ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಶುಭದಿನ: 06. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ಯೋಜನೆಗಳನ್ನು ವೇಗವಾಗಿ ಅನುಷ್ಠಾನಕ್ಕೆ ತರಲು ಉತ್ಸಾಹದಿಂದ ಕಾರ್ಯ ನಿರ್ವಹಿಸುತ್ತೀರಿ. ಹಣ ಹೂಡಿಕೆ ಹಾಗೂ ವಿದೇಶ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಈ ಅವಧಿಯಲ್ಲಿ ದೈಹಿಕ ಸಮಸ್ಯೆಗಳು ಕಾಡಬಹುದು. ವಾರದ ಅಂತ್ಯದಲ್ಲಿ ಸಾಲ ಮರು ಪಾವತಿಯಲ್ಲಿ ಸಮಸ್ಯೆ ಎದುರಾಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ತೊಂದರೆ ಆಗುತ್ತದೆ. ಶುಭದಿನ 06. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಆ ಮೂಲಕ ಜೀವನ ಶೈಲಿ ಹಾಗೂ ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸಾಧ್ಯವಾಗುತ್ತದೆ. ಕೆಲವು ಸಂಗತಿಗಳಲ್ಲಿ ವೇಗವನ್ನು ತರುವುದು ಸವಾಲಾಗಿ ಪರಿಣಮಿಸಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಶುಭದಿನ 04. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೆ ಈಡು ಮಾಡಿದ್ದ ವಾತಾವರಣವು ಕರಗಲಿದೆ. ನಿಮ್ಮ ಆರೋಗ್ಯ ಅನುಕೂಲಕರವಾಗಿ ಪರಿಣಮಿಸಲಿದೆ. ಆಹಾರ ಪಥ್ಯವನ್ನು ಅನುಸರಿಸಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಶುಭದಿನ 05. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.